**Akashvani : Bangalore**
**Regional Bulletin In Kannada**
**17.09.2025 / 2.30 pm**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**17.09.2025 / 2.30 pm**

**<><*<><>*><>**

<u>ಮುಖ್ಯಾಂಶಗಳು</u>

೧. ಕಲ್ಯಾಣ ಕರ್ನಾಟಕದಲ್ಲಿ ೫ ಸಾವಿರದ ೨೬೭ ಶಿಕ್ಷಕರ ಹುದ್ದೆಗೆ ಭರ್ತಿಗೆ ಸರ್ಕಾರ ಭರವಸೆ

೨. ಹುಬ್ಬಳ್ಳಿ ರೈಲ್ವೆ ನಿಲ್ದಾಣದಲ್ಲಿ ಸ್ವಚ್ಛ ಭಾರತ್ ಅಭಿಯಾನದಲ್ಲಿ ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ಭಾಗಿ

೩. ರಾಜ್ಯದಲ್ಲಿ ಬಿಪಿಎಲ್ ಕಾರ್ಡ್‌ಗಳ ಪರಿಷ್ಕರಣೆ ಅನಿವಾರ್ಯ - ಸಚಿವ ಕೆ.ಹೆಚ್. ಮುನಿಯಪ್ಪ

೪. ಕಲಬುರ್ಗಿಯಲ್ಲಿ ಬೆಳೆ ಹಾನಿ ಪ್ರದೇಶ ವೀಕ್ಷಿಸಿದ ಮುಖ್ಯಮಂತ್ರಿ; ಸಮರ್ಪಕ ಪರಿಹಾರ ನೀಡುವಂತೆ ಅಧಿಕಾರಿಗಳಿಗೆ ಸೂಚನೆ

*************

ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಕುಸಿತ ಕಂಡ ಹಿನ್ನೆಲೆಯಲ್ಲಿ ಖಾಲಿಯಿರುವ ೫ ಸಾವಿರದ ೨೬೭ ಶಿಕ್ಷಕರನ್ನು ನೇಮಕ ಮಾಡಲು ಸೂಚನೆ ನೀಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಕಟಿಸಿದ್ದಾರೆ. ಕಲ್ಯಾಣ ಕರ್ನಾಟಕ ಉತ್ಸವದ ಅಂಗವಾಗಿ ರಾಷ್ಟ್ರಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು ಸಮಾಜ ಕಲ್ಯಾಣ, ಹಿಂದುಳಿದ ವರ್ಗ ಹಾಗೂ ಅಲ್ಪ ಸಂಖ್ಯಾತರ ಇಲಾಖೆಯ ವತಿಯಿಂದ ನೂತನವಾಗಿ ವಸತಿ ಶಾಲೆ ಹಾಗೂ ವಸತಿ ನಿಲಯಗಳನ್ನು ನಿರ್ಮಿಸಲಾಗುತ್ತಿದೆ ಎಂದು ಹೇಳಿದ್ದಾರೆ. ಕಲ್ಯಾಣ ಕರ್ನಾಟಕ ಭಾಗಕ್ಕೆ ಪ್ರತ್ಯೇಕ ಸಚಿವಾಲಯ ರಚಿಸಲು ಆದೇಶ ಹೊರಡಿಸಲಾಗಿದ್ದು, ಇನ್ನೊಂದು ವಾರದಲ್ಲಿ ಹುದ್ದೆ ಸಹಿತ ಪ್ರತ್ಯೇಕ ಅಧಿಸೂಚನೆ ಹೊರಡಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಜನರ ಬದುಕು ಹಸನು ಗೊಳಿಸಲು ಪಂಚ ಗ್ಯಾರಂಟಿ ಯೋಜನೆಗಳಿಗಾಗಿ ೧ ಲಕ್ಷ ಕೋಟಿ ವೆಚ್ಚ ಮಾಡಲಾಗುತ್ತಿದೆ ಎಂದು ತಿಳಿಸಿದ್ದಾರೆ.

ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ ( 35 ಸೆಕೆಂಡುಗಳು)

*************

ಬಳ್ಳಾರಿಯಲ್ಲಿ ನಡೆದ ಕಲ್ಯಾಣ ಕರ್ನಾಟಕ ಉತ್ಸವ ಕಾರ್ಯಕ್ರಮದಲ್ಲಿ ಪೌರಾಡಳಿತ ಸಚಿವ ರಹೀಮ್ ಖಾನ್ ರಾಷ್ಟ್ರ ಧ್ವಜಾರೋಹಣ ನೆರವೇರಿಸಿದರು. ಬಳಿಕ ಮಾತನಾಡಿದ ಅವರು, ಕಲ್ಯಾಣ ಕರ್ನಾಟಕದ ಜನತೆಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಶೇ ೮೦ ಮೀಸಲಾತಿ ದೊರೆಯುತ್ತಿದೆ. ಯುವಜನತೆ ಉತ್ತಮ ವಿದ್ಯಾಭಾಸದ ಮೂಲಕ ಸದುಪಯೋಗ ಪಡೆಸಿಕೊಳ್ಳಬೇಕು ಎಂದು ಕರೆ ನೀಡಿದರು. ಕೊಪ್ಪಳದಲ್ಲಿ ಹೈದರಾಬಾದ್ ಕರ್ನಾಟಕ ವಿಮೋಚನಾ ದಿನ ಅಂಗವಾಗಿ ಆಚರಿಸುವ

೭೮ನೇ ಕಲ್ಯಾಣ ಕರ್ನಾಟಕ ಉತ್ಸವದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ ತಂಗಡಗಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿದರು. ನಂತರ ಮಾತನಾಡಿದ ಅವರು, ಹೈದ್ರಾಬಾದ್ ನಿಜಾಮರಿಂದ ಸ್ವಾತಂತ್ರ್ಯ ಪಡೆದ ಈ ದಿನ ನಮಗೆಲ್ಲ ಮಹತ್ವದ ದಿನ ಎಂದು ಹೇಳಿದರು. ವಿಜಯನಗರದಲ್ಲಿ ಜಿಲ್ಲಾಧಿಕಾರಿ ಕವಿತಾ ಎಸ್ ಮನ್ನಿಕೇರಿ ಧ್ವಜಾರೋಹಣ ನೆರವೇರಿಸಿದರು. ಬಳಿಕ ಮಾತನಾಡಿದ ಅವರು, ೨೦೧೩ರಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯನ್ನು ಸ್ಥಾಪಿಸುವ ಮೂಲಕ ಏಳು ಜಿಲ್ಲೆಗಳಿಗೆ ವಿಶೇಷ ಅನುದಾನ ನೀಡುವ ಮೂಲಕ ಜಿಲ್ಲೆಗಳನ್ನು ಅಭಿವೃದ್ಧಿಪಥದತ್ತ ಕೊಂಡೊಯ್ಯಲಾಗುತ್ತಿದೆ ಎಂದು ಹೇಳಿದರು. ಧ್ವಜಾರೋಹಣದ ನಂತರ ಜಿಲ್ಲಾಧಿಕಾರಿಗಳು ವಿವಿಧ ತುಕಡಿಗಳ ಗೌರವ ವಂದನೆ ಸ್ವೀಕರಿಸಿದರು.

*************

೨೦೪೭ ರ ವೇಳೆಗೆ ದೇಶದ ಜನರು ಹಾಗೂ ಆರ್ಥಿಕತೆ ಸದೃಢವಾಗಿರಬೇಕು ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ತಿಳಿಸಿದ್ದಾರೆ. ಹುಬ್ಬಳ್ಳಿ ರೈಲ್ವೆ ನಿಲ್ದಾಣದದಲ್ಲಿ ನೈಋತ್ಯ ರೈಲ್ವೆ ವಲಯ ಆಯೋಜಿಸಿದ್ದ ಸ್ವಚ್ಛ ಭಾರತ್ ಅಭಿಯಾನ ಕಾರ್ಯಕ್ರಮದಲ್ಲಿ ಮಾತನಾಡಿದ, ಅವರು ಈಗ ಎಲ್ಲರಲ್ಲಿ ಸ್ವಚ್ಛತೆ ಬಗ್ಗೆ ಜಾಗೃತಿ ಮೂಡಿದೆ ಎಂದು ಹೇಳಿದರು. ಪ್ರಧಾನಿ ಮೋದಿ ಅವರ ನಾಯಕತ್ವದಲ್ಲಿ ದೇಶ ಪ್ರಗತಿಯತ್ತ ಸಾಗುತ್ತಿದೆ ಎಂದು ತಿಳಿಸಿದರು.

ಧ್ವನಿ :ಸಚಿವ ಪ್ರಹ್ಲಾದ್ ಜೋಶಿ, ( 23 ಸೆಕೆಂಡುಗಳು)

*************

ಇಂದಿನಿಂದ ಅಕ್ಟೋಬರ್ ೨ ರವರೆಗೆ ಚಿಕ್ಕಬಳ್ಳಾಪುರ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಸ್ವಚ್ಛತಾ ಅಭಿಯಾನ ಹಮ್ಮಿಕೊಳ್ಳಲಾಗಿದೆ. ದಕ್ಷಿಣ ಜಲಿಯನ್ ವಾಲಾಬಾಗ್ ಖ್ಯಾತಿಯ ಗೌರಿಬಿದನೂರು ತಾಲ್ಲೂಕು ವಿಧುರಾಶ್ವತ್ಥದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಅತೀಕ್ ಪಾಷಾ ಇಂದು ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು ಈ ಬಾರಿ ಗ್ರಾಮೀಣ ಪ್ರದೇಶಗಳಲ್ಲಿ ಹೆಚ್ಚು ಕಸ ಹಾಕುವ ಬ್ಲಾಕ್ ಸ್ಪಾಟ್ ಗಳ ಬಗ್ಗೆ ಹೆಚ್ಚು ಗಮನ ಕೇಂದ್ರೀಕರಿಸಲಾಗುವುದು. ಜೊತೆಗೆ ನೈರ್ಮಲ್ಯ ಮತ್ತು ಆರೋಗ್ಯ ಸಂರಕ್ಷಣೆ ಕುರಿತು ಅರಿವು ಮೂಡಿಸಲಾಗುವುದು ಎಂದು ತಿಳಿಸಿದರು. ಪ್ರವಾಸಿ ತಾಣಗಳು, ದೇವಾಲಯಗಳು, ಶಾಲೆ, ಅಂಗನವಾಡಿ ಮತ್ತಿತರ ಸ್ಥಳಗಳ ಬಗ್ಗೆ ಹೆಚ್ಚಿನ ಒತ್ತು ನೀಡಿ ಸ್ವಚ್ಛತಾ ಅಭಿಯಾನ ಯಶಸ್ವಿಗೊಳಿಸಲಾಗುವುದು ಎಂದು ಹೇಳಿದ್ದಾರೆ.

ಧ್ವನಿ : ಅತೀಕ್ ಪಾಷಾ, ( 35 ಸೆಕೆಂಡುಗಳು )

ಇದೇ ಸಂದರ್ಭದಲ್ಲಿ ಸ್ವಚ್ಚತಾ ಹೀ ಸೇವಾ ಅಭಿಯಾನದ ಪ್ರತಿಜ್ಞಾ ವಿಧಿಯನ್ನು ಬೋಧಿಸಲಾಯಿತು.

*************

ರಾಜ್ಯದಲ್ಲಿ ಬಿಪಿಎಲ್ ಕಾರ್ಡ್‌ಗಳ ಪರಿಷ್ಕರಣೆ ಅನಿವಾರ್ಯ ಎಂದು ಆಹಾರ ನಾಗರಿಕ ಸರಬರಾಜು ಸಚಿವ ಕೆ.ಹೆಚ್.ಮುನಿಯಪ್ಪ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಮಾತನಾಡಿದ ಅವರು, ಅನರ್ಹರು

ಕಂಡು ಬಂದರೆ ಕಾಡ್ ರದ್ದು ಮಾಡುವುದಿಲ್ಲ. ಬದಲಾಗಿ ಅವರನ್ನು ಎಪಿಎಲ್ ಕಾರ್ಡ್‌ಗೆ ಸೇರಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ದಕ್ಷಿಣ ಭಾರತದಲ್ಲೇ ರಾಜ್ಯದಲ್ಲೇ ಅತೀ ಹೆಚ್ಚು ಅಂದರೆ ಶೇಕಡಾ ೭೫ ರಷ್ಟು ಬಿಪಿಎಲ್ ಕಾರ್ಡ್‌ಗಳು ಇವೆ ಎಂದು ಹೇಳಿದ್ದಾರೆ. ಮುಂದಿನ ತಿಂಗಳು ಬಿಪಿಎಲ್ ಕಾರ್ಡ್‌ಗಳಿಗೆ ಅರ್ಜಿ ಆಹ್ವಾನಿಸಲಾಗುವುದು ಎಂದು ತಿಳಿಸಿದ್ದಾರೆ.

*************

ಜಂಟಿ ಸಮೀಕ್ಷೆ ಮುಗಿಯುತ್ತಿದ್ದಂತೆ ಬೆಳೆ ಹಾನಿಗೆ ಸಮರ್ಪಕವಾಗಿ ಪರಿಹಾರ ತಲುಪಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಕಲಬುರ್ಗಿಯಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳ ಜೊತೆ ಸಭೆ ನಡೆಸಿ ಅತಿವೃಷ್ಠಿಯಿಂದ ಸಂಭವಿಸಿದ ಬೆಳೆ ಹಾನಿ ಕುರಿತಂತೆ ಮಾಹಿತಿ ಪಡೆದ ಅವರು, ಬೆಳೆ ಹಾನಿ ಪ್ರದೇಶಗಳಿಗೆ ಭೇಟಿ ನೀಡಿ ಸಲಹೆ ಸೂಚನೆಗಳನ್ನು ನೀಡಿದರು. ಬೀದರ್, ಕಲ್ಬುರ್ಗಿ, ಕೊಪ್ಪಳ, ಯಾದಗಿರಿ ಜಿಲ್ಲೆಗಳಲ್ಲಿ ಮಳೆಯಿಂದ ಹೆಚ್ಚು ಹಾನಿ ಸಂಭವಿಸಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು. ಡ್ರೋಣ್ ಕ್ಯಾಮರಾ ಮೂಲಕ ಮಾಡಿರುವ ಬೆಳೆ ಹಾನಿ ವೀಡಿಯೊವನ್ನು ಅಧಿಕಾರಿಗಳು ಮುಖ್ಯಮಂತ್ರಿಗಳಿಗೆ ತೋರಿಸಿ ವಿವರಿಸಿದರು. ಸಭೆಯ ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅಫ್ಜಲಪುರ್ ವಿಧಾನಸಭಾ ಕ್ಷೇತ್ರದ ಬೆಳೆ ಹಾನಿ ಪ್ರದೇಶಗಳಿಗೆ ಭೇಟಿ ನೀಡಿದರು.

*************

ಪ್ರಧಾನಿ ನರೇಂದ್ರ ಮೋದಿ ಅವರ ಜನ್ಮದಿನದ ಪ್ರಯುಕ್ತ ಭಾರತೀಯ ಜನತಾ ಪಾರ್ಟಿ ವತಿಯಿಂದ ಬೆಳಗಾವಿಯಲ್ಲಿ ರಕ್ತದಾನ ಶಿಬಿರ ನಡೆಯಿತು. ಸಂಸದ ಜಗದೀಶ್ ಶೆಟ್ಟರ್ ರಕ್ತದಾನ ಶಿಬಿರಕ್ಕೆ ಚಾಲನೆ ನೀಡಿದರು. ನಂತರ ಮಾತನಾಡಿದ ಅವರು, ಯುವ ಜನತೆ ರಕ್ತದಾನದ ಮಹತ್ವ ಅರಿತು ರಕ್ತದಾನಕ್ಕೆ ಮುಂದಾಗಬೇಕು ಎಂದು ಕರೆ ನೀಡಿದರು.

*************

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಇಂದು ಭಗವಾನ್ ವಿಶ್ವಕರ್ಮ ಜಯಂತಿಯನ್ನು ಶ್ರದ್ಧಾಭಕ್ತಿಗಳಿಂದ ಆಚರಿಸಲಾಯಿತು. ದೊಡ್ಡಬಳ್ಳಾಪುರದ ತಾಲೂಕು ಕಚೇರಿಯಲ್ಲಿ ನಡೆದ ವಿಶ್ವಕರ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ತಹಸೀಲ್ದಾರ್ ವಿಭಾ ವಿದ್ಯಾ ರಾಥೋಡ್ ಮಾತನಾಡಿ, ದೇಶದ ಶ್ರೀಮಂತ ಪರಂಪರೆಗೆ ವಿಶ್ವಕರ್ಮರ ಕೊಡುಗೆ ಅಪಾರವಾಗಿದೆ ಎಂದರು. ಹಾಸನ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಆಯೋಜಿಸಲಾಗಿದ್ದ ಮೆರವಣಿಗೆಗೆ ಜಿಲ್ಲಾಧಿಕಾರಿ ಕೆ.ಎಸ್ ಲತಾ ಕುಮಾರಿ ಚಾಲನೆ ನೀಡಿದರು. ಬೆಳ್ಳಿ ರಥದಲ್ಲಿ ಇರಿಸಲಾಗಿದ್ದ ವಿಶ್ವಕರ್ಮ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿದ ಬಳಿಕ ವಿವಿಧ ಕಲಾತಂಡಗಳೊಂದಿಗೆ ಸಾಗಿದ ಮೆರವಣಿಗೆ ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಹಾಸನಾಂಬ ಕಲಾ ಕ್ಷೇತ್ರ ತಲುಪಿತು.

*************

ಸ್ವಾಮಿ ವಿವೇಕಾನಂದರ ಜೀವನ ದರ್ಶನದ ಸ್ಫೂರ್ತಿದಾಯಕ ಚಲನಚಿತ್ರ "ಚಲೋ ಜೀತೆ ಹೆ", ಇಂದಿನಿಂದ ಅಕ್ಟೋಬರ್ ೨ರವರೆಗೆ ದೇಶದಾದ್ಯಂತ ವಿಶೇಷ ಪುನಃ ಪ್ರದರ್ಶನಗೊಳ್ಳಲಿದೆ. 'ಪರರಿಗಾಗಿ ಯಾರು ಜೀವಿಸುತ್ತಾರೋ ಅವರು ನಿಜವಾಗಿ ಜೀವಿಸುತ್ತಾರೆ' ಎನ್ನುವ ವಿವೇಕಾನಂದರ ತತ್ವಾಧಾರಿತ ಈ ಚಿತ್ರ, ೨೦೧೮ ರಲ್ಲಿ ಅತ್ಯಧಿಕ ವೀಕ್ಷಿಸಲಾದ ಕಿರುಚಿತ್ರಗಳಲ್ಲಿ ಒಂದೆಂದು ಪರಿಗಣಿಸಲಾಗಿದೆ. ಈ ಚಲನಚಿತ್ರವು ಲಕ್ಷಾಂತರ ಶಾಲೆಗಳಲ್ಲಿ, ದೇಶದಾದ್ಯಂತ ನೂರುಕ್ಕಿಂತ ಹೆಚ್ಚು ನಗರಗಳಲ್ಲಿ ಇರುವ ಸುಮಾರು ೫೦೦ ಚಲನಚಿತ್ರ ಮಂದಿರಗಳಲ್ಲಿ ಪ್ರದರ್ಶನಗೊಳ್ಳಲಿವೆ.

*************

ಸೆಪ್ಟಂಬರ್ ೨೨ ರಿಂದ ದಾವಣಗೆರೆ ಜಿಲ್ಲಾದ್ಯಂತ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಗೆ ಎಲ್ಲ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದ್ದು, ಸಮೀಕ್ಷಾ ಕಾರ್ಯಕ್ಕೆ ೩ ಸಾವಿರದ ೮೭೬ ಗಣತಿದಾರರನ್ನು ಬಳಕೆ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಜಿ.ಎಂ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ಮೊಬೈಲ್ ತಂತ್ರಾಂಶದ ಮೂಲಕ ಸಮೀಕ್ಷಾ ಕಾರ್ಯ ನಡೆಯಲಿದ್ದು, ೯ ಮತ್ತು ೧೦ ನೇ ತರಗತಿಗೆ ಪಾಠ ಮಾಡುವ ಶಿಕ್ಷಕರನ್ನು ಹೊರತುಪಡಿಸಿ ಉಳಿದ ಶಿಕ್ಷಕರು ಸೇರಿದಂತೆ ಒಟ್ಟು ೩ ಸಾವಿರದ ೮೭೬ ಗಣತಿದಾರರನ್ನು ಸಮೀಕ್ಷಾ ಕಾರ್ಯಕ್ಕೆ ಬಳಕೆ ಮಾಡಿಕೊಳ್ಳಲಾಗಿದೆ ಎಂದು ಹೇಳಿದ್ದಾರೆ.

*************

ಕೋಲಾರ ಜಿಲ್ಲೆಯ ರೈತರ ಅಭಿವೃದ್ಧಿಗಾಗಿ ಹಲವು ಆಯಾಮಗಳಲ್ಲಿ ಶ್ರಮಿಸುತ್ತಿರುವ ಸೆಹಗಲ್ ಫೌಂಡೇಶನ್ ಕಾರ್ಯ ಶ್ಲಾಘನೀಯವಾದದ್ದು ಎಂದು ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾ.ಶಿವಾನಂದ ಹೊಂಗಲ್ ತಿಳಿಸಿದ್ದಾರೆ. ರೈತರು ಆರ್ಥಿಕವಾಗಿ ಸಬಲರಾದರೆ ಮಾತ್ರ ದೇಶ ಅಭಿವೃದ್ಧಿ ಹೊಂದಲು ಸಾಧ್ಯ ಎಂದು ಅಭಿಪ್ರಾಯಪಟ್ಟಿದ್ದಾರೆ. ಈ ಸಂಸ್ಥೆ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಕೈ ಜೋಡಿಸಿರುವುದು ಉತ್ತಮವಾದ ಕಾರ್ಯ ಎಂದು ಹೇಳಿದ್ದಾರೆ.

*************